ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಮಹಿಳಾ ಕಾಲೇಜು

ಮೈಸೂರು ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತ, ನ್ಯಾಕ್‌ನಿಂದ 'ಬಿ' ಮಾನ್ಯತೆ ಪಡೆದಿದೆ

**ಕೊಳ್ಳೇಗಾಲ – 571 440 ಚಾಮರಾಜನಗರ ಜಿಲ್ಲೆ**

☎: 08224-252149 jsscwk@gmail.com www. jsscwkgl.org

## ಐತಿಹಾಸಿಕ ಪರಂಪರೆ ಉಳಿಸಿ ಕಾರ್ಯಕ್ರಮ

ಕರ್ನಾಟಕ ಇತಿಹಾಸ ಅಕಾಡಮಿ ಬೆಂಗಳೂರು ಪ್ರಾಚ್ಯವಸ್ತು ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮೈಸೂರು ಮತ್ತು ರೋಟರಿ ಸಂಸ್ಥೆ ಕೊಳ್ಳೇಗಾಲ ಮತ್ತು ಇತಿಹಾಸ ವಿಭಾಗ ಜೆಎಸ್‌ಎಸ್ ಕಾಲೇಜು ಕೊಳ್ಳೇಗಾಲ ಇವರ ಸಹಯೋಗದೊಂದಿಗೆ ಐತಿಹಾಸಿಕ ಪರಂಪರೆ ಉಳಿಸಿ ಕಾರ್ಯಕ್ರಮ ದಿನಾಂಕ 10.5.2025ರಂದು ಜೆಎಸ್‌ಎಸ್ ಮಹಿಳಾ ಕಾಲೇಜು ಕೊಳ್ಳೇಗಾಲ ಇಲ್ಲಿ ಏರ್ಪಡಿಸಲಾಯಿತು. ರೋಟರಿ ಸಂಸ್ಥೆಯ ಅಧ್ಯಕ್ಷರಾದ ಶ್ರೀಮತಿ ಸರಸ್ವತಿ ಹೊನ್ನಪ್ಪನವರು ಕಾರ್ಯಕ್ರಮವನ್ನು ಉದ್ಘಾಟಿಸಿ ವಿಶ್ವಪರಂಪರೆ ಪಟ್ಟಿಯಲ್ಲಿ ಭಾರತವು 40 ಕ್ಕೂ ಹೆಚ್ಚು ಪ್ರದೇಶಗಳನ್ನು ಹೊಂದಿರುವುದು ಸಂತೋಷದ ವಿಚಾರ ಎಂದರು ಚಿತ್ರಕಲಾ ಪ್ರದರ್ಶನವನ್ನು ಉದ್ಘಾಟಿಸಿದ ರೋಟರಿಯನ್ ಜಗದೀಶ್‌ರವರು ಪ್ರಾಚೀನ ಚಿತ್ರಕಲೆಗಳಿಂದಲೂ ಪರಂಪರೆಯನ್ನು ಅರ್ಥಮಾಡಿಕೊಳ್ಳ ಬಹುದು ಎಂದರು.

ಇತಿಹಾಸ ವಿಭಾಗದ ಮುಖ್ಯಸ್ಥರಾದ ಕೆ ಎಸ್ ಮಹೇಶರವರು ಭಾರತ ವಿಶ್ವ ಪರಂಪರೆಯ ಪಟ್ಟಿಯಲ್ಲಿ ಮೂರನೇ ಸ್ಥಾನವನ್ನು ಪಡೆದಿರುವುದು ಹೆಮ್ಮೆಯ ವಿಚಾರವಾಗಿದೆ. ನಮ್ಮ ಪರಂಪರೆಯನ್ನು ಉಳಿಸಿ ಬೆಳಸಬೇಕಾಗಿರುವುದು ನಮ್ಮ ಆದ್ಯ ಕರ್ತವ್ಯವಾಗಿದೆ ಎಂದರು. ಪ್ರಾಚಾರ್ಯರಾದ ಡಾ ಹೆಚ್ ಎಸ್ ಕೊಂಗಳಪ್ಪರವರು ನಮ್ಮ ಭಾರತದ ಆಚಾರ ವಿಚಾರಗಳನ್ನು ಉಳಿಸಿ ಬೆಳಸಬೇಕು ಎಂದರು. ಚಿತ್ರಕಲಾ ಶಿಕ್ಷಕರಾದ ಆರ್ ರಘು ರವರು ಐತಿಹಾಸಿಕ ಚಿತ್ರಗಳ ಪ್ರದರ್ಶನ ಮಾಡಿದರು. ರೋಟರಿಯನ್ ಪುಟ್ಟ ಅರಸು ಶೆಟ್ಟಿ ರವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿನಿಯರು ಭಾಗವಹಿಸಿದ್ದರು. ಪ್ರಾರ್ಥನೆಯನ್ನು ಮಧುಶ್ರೀ ಮತ್ತು ತಂಡ, ನಿರೂಪಣೆ ಸುಪ್ರೀತಾ, ಚಂದನಾ ಸ್ವಾಗತ ಮತ್ತು ಪೂರ್ಣಿಮ ವಂದಿಸಿದರು.

